ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

**ಸಂಖ್ಯೆ:ಕರಾಸಾ/ಕೇಕ/ಆಡಳತ/ಸೇನಿ/ / ೪೪ /2020-21** **ದಿನಾಂಕ: 18-03-2021** 19

## ಸುತ್ತೋಲೆ ಸಂಖ್ಯೆ: 1688

**ವಿಷಯ:** ದರ್ಜೆ-3 ಮೇಲ್ವಿಚಾರಕೇತರ ಹಾಗೂ ದರ್ಜೆ-4 ಹುದ್ದೆಗಳಿಗೆ ನಿಗದಿಪಡಿಸಿರುವ ತರಬೇತಿ ಅವಧಿಯನ್ನು 2 ವರ್ಷದಿಂದ 1 ವರ್ಷಕ್ಕೆ ಇಳಿಸುವ ಬಗ್ಗೆ.

**ಉಲ್ಲೇಖ:** 1. ಟಿಡಿ 07 ಟಿಸಿಎಸ್ 2021 ದಿನಾಂಕ:16-03-2021
2. ಸುತ್ತೋಲೆ ಸಂಖ್ಯೆ: 1317, ದಿನಾಂಕ:09.09.2004
3. ಸುತ್ತೋಲೆ ಸಂಖ್ಯೆ: 1422, ದಿನಾಂಕ:08.07.2010

- - - - -

ಕರಾರಸಾ ನಿಗಮ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿ 1982ರ ನಿಯಮಾವಳಿ 12 (1) ರಡಿ ಇರುವ ಅವಕಾಶದಂತೆ ದರ್ಜೆ-3 ಮೇಲ್ವಿಚಾರಕೇತರ ಹಾಗೂ ದರ್ಜೆ-4 ಹುದ್ದೆಗಳಿಗೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ 2 ವರ್ಷಗಳ ತರಬೇತಿ ಅವಧಿಯನ್ನು ಸುತ್ತೋಲೆ ಸಂಖ್ಯೆ: 1317, ದಿನಾಂಕ:09.09.2004ರಲ್ಲಿ ನಿಗದಿಪಡಿಸಲಾಗಿದೆ.

ಪ್ರಸ್ತುತ, ಸರ್ಕಾರವು ಉಲ್ಲೇಖ-1 ರಡಿ ಸಾರಿಗೆ ಸಂಸ್ಥೆಗಳಲ್ಲಿ ತರಬೇತಿಯಲ್ಲಿರುವ ನೌಕರರ ತರಬೇತಿ ಅವಧಿಯನ್ನು ಜುಲೈ-2021 ರಿಂದ ಜಾರಿಗೆ ಬರುವಂತೆ ಎರಡು ವರ್ಷದಿಂದ ಒಂದು ವರ್ಷಕ್ಕೆ ಇಳಿಸಲು ಅನುಮೋದನೆ ನೀಡಿರುತ್ತದೆ. ಅದರಂತೆ, ಸುತ್ತೋಲೆ ಸಂಖ್ಯೆ: 1317, ದಿನಾಂಕ:09.09.2004ರಲ್ಲಿ ನಿಗದಿಪಡಿಸಿರುವ ತರಬೇತಿ ಅವಧಿಯನ್ನು ಮಾರ್ಪಡಿಸಿ ದರ್ಜೆ-3 ಮೇಲ್ವಿಚಾರಕೇತರ ಹಾಗೂ ದರ್ಜೆ-4ರ ಹುದ್ದೆಗಳ ತರಬೇತಿ ಅವಧಿಯನ್ನು 01-ಜುಲೈ-2021 ರಿಂದ ಜಾರಿಗೆ ಬರುವಂತೆ 1 (ಒಂದು) ವರ್ಷಕ್ಕೆ ನಿಗದಿಪಡಿಸಲಾಗಿದೆ.

ಪ್ರಸ್ತುತ, ತರಬೇತಿಯಲ್ಲಿರುವ ಅಭ್ಯರ್ಥಿಗಳನ್ನು ಈ ಕೆಳಕಂಡಂತೆ ಪರೀಕ್ಷಾರ್ಥ ಸೇವೆ ಮೇಲೆ ನಿಯೋಜಿಸುವುದು.

1. 2 ವರ್ಷದ ತರಬೇತಿ ಮೇಲೆ ನೇಮಕಗೊಂಡ ಅಭ್ಯರ್ಥಿಗಳು ದಿನಾಂಕ:01-ಜುಲೈ-2021 ರಂದು ಇದ್ದಂತೆ ಒಂದು ವರ್ಷ ತರಬೇತಿ ಅವಧಿಯನ್ನು ಪೂರ್ಣಗೊಳಿಸಿದ್ದಲ್ಲಿ, ದಿನಾಂಕ: 01-ಜುಲೈ-2021 ರಿಂದ ಜಾರಿಗೆ ಬರುವಂತೆ ನಿಯಮಾನುಸಾರ ಪರೀಕ್ಷಾರ್ಥ ಸೇವೆ ಮೇಲೆ ನಿಯೋಜಿಸುವುದು.
2. ದಿನಾಂಕ:01-ಜುಲೈ-2021 ರಂದು ಇದ್ದಂತೆ ಒಂದು ವರ್ಷ ತರಬೇತಿ ಅವಧಿ ಪೂರ್ಣಗೊಳ್ಳದೆ ಇರುವ ತರಬೇತಿ ಅಭ್ಯರ್ಥಿಗಳನ್ನು ಒಂದು ವರ್ಷ ಪೂರ್ಣಗೊಂಡ ನಂತರ ನಿಯಮಾನುಸಾರ ಪರೀಕ್ಷಾರ್ಥ ಸೇವೆ ಮೇಲೆ ನಿಯೋಜಿಸುವುದು.

ಉಳಿದಂತೆ ಉಲ್ಲೇಖಿತ ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಸಂಬಂಧಪಟ್ಟವರೆಲ್ಲರೂ ಮೇಲಿನ ಆದೇಶವನ್ನು ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿ ಮಾಹಿತಿಗಾಗಿ:</u>

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.



Scanned with CamScanner

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
9. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner